# <u>ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು</u>

**(ಕರ್ನಾಟಕ ಸರ್ಕಾರದ ಅಧೀನದ ಸ್ವಾಯತ್ತ ಸಂಸ್ಥೆ)**

**ವಿಕ್ಟೋರಿಯಾ ಆಸ್ಪತ್ರೆ ಆವರಣ, ಕೋಟೆ, ಬೆಂಗಳೂರು –560 002.**

gdcribangalore@gmail.com

ಸಂಖ್ಯೆ:ಸದಂಕಾಸಂಸಂ/ಸಿ(2)/12/2016–17

ನಿರ್ದೇಶಕರು ಮತ್ತು ಡೀನ್ ರವರ ಕಾರ್ಯಾಲಯ,
ದಿನಾಂಕ:27.12.2016

## <u>ಅಧಿಸೂಚನೆ</u>

ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಈ ಸ್ವಾಯತ್ತ ಸಂಸ್ಥೆಯಲ್ಲಿರುವ ಗ್ರೂಪ್–ಸಿ ವರ್ಗದ ವಿವಿಧ ಅರೆ ವೈದ್ಯಕೀಯ ವೃಂದದ ಹುದ್ದೆಗಳನ್ನು ಭರ್ತಿ ಮಾಡುವ ಸಂಬಂಧ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

**1. ಹುದ್ದೆಯ ಪದನಾಮ, ವೇತನ ಶ್ರೇಣಿ, ಹುದ್ದೆಗಳ ಸಂಖ್ಯೆ, ನಿಗದಿಪಡಿಸಿರುವ ವಿದ್ಯಾರ್ಹತೆ, ತರಬೇತಿ ಮತ್ತು ವಯೋಮಿತಿ ವಿವರ ಈ ಕೆಳಕಂಡಂತಿವೆ.**

| ಕ್ರಮ ಸಂಖ್ಯೆ | ಹುದ್ದೆಯ ಪದನಾಮ, ವೇತನ ಶ್ರೇಣಿ ಮತ್ತು ಒಟ್ಟು ಹುದ್ದೆಗಳು | ನಿಗದಿಪಡಿಸಿರುವ ಕನಿಷ್ಠ ವಿದ್ಯಾರ್ಹತೆ |
|---|---|---|
| 1 | **ದಂತ ತಂತ್ರಜ್ಞರು**<br>ರೂ.16000–29600<br>(04 ಹುದ್ದೆಗಳು) | ಕರ್ನಾಟಕ ಅರೆ ವೈದ್ಯಕೀಯ ಮಂಡಳಿ ಅಥವಾ ತತ್ಸಮಾನ ಮಂಡಳಿಯು ನಡೆಸುವ ದಂತ ತಂತ್ರಜ್ಞತೆಯಲ್ಲಿ ಡಿಪ್ಲೋಮ ಅಥವಾ ತತ್ಸಮಾನ ವಿದ್ಯಾರ್ಹತೆ ಪಡೆದಿರಬೇಕು. |
| 2 | **ಪ್ರಯೋಗಶಾಲಾ ತಂತ್ರಜ್ಞರು**<br>ರೂ.14550–26700<br>(01 ಹುದ್ದೆ) | ಕರ್ನಾಟಕ ಅರೆ ವೈದ್ಯಕೀಯ ಮಂಡಳಿ ಅಥವಾ ತತ್ಸಮಾನ ಮಂಡಳಿಯು ನಡೆಸುವ ವೈದ್ಯಕೀಯ ಪ್ರಯೋಗಶಾಲಾ ತಂತ್ರಜ್ಞತೆಯಲ್ಲಿ ಡಿಪ್ಲೋಮ ಅಥವಾ ತತ್ಸಮಾನ ವಿದ್ಯಾರ್ಹತೆ ಪಡೆದಿರಬೇಕು. |

**2) ವಯೋಮಿತಿ:–** ಅರ್ಜಿಗಳನ್ನು ಸ್ವೀಕರಿಸಲು ನಿಗದಿಪಡಿಸಿದ ಕೊನೆಯ ದಿನಾಂಕಕ್ಕೆ ಈ ಕೆಳಕಂಡ ಕನಿಷ್ಠ ವಯೋಮಿತಿ ಹೊಂದಿರಬೇಕು ಮತ್ತು ಗರಿಷ್ಠ ವಯೋಮಿತಿ ಮೀರಿರಬಾರದು.

| ವರ್ಗ | ಕನಿಷ್ಠ | ಗರಿಷ್ಠ |
|---|---|---|
| ಪ.ಜಾತಿ, ಪ.ಪಂ ಮತ್ತು ಪ್ರವರ್ಗ–1ಕ್ಕೆ | 18 ವರ್ಷಗಳು | 40 ವರ್ಷಗಳು |
| ಇತರೆ ಹಿಂದುಳಿದ ವರ್ಗಗಳ 2ಎ, 2ಬಿ, 3ಎ, 3ಬಿ, ಗಳಿಗೆ | 18 ವರ್ಷಗಳು | 38 ವರ್ಷಗಳು |
| ಸಾಮಾನ್ಯ ವರ್ಗದವರಿಗೆ | 18 ವರ್ಷಗಳು | 35 ವರ್ಷಗಳು |

## 3) ವಯೋಮಿತಿ ಸಡಿಲಿಕೆ

1) ಅಭ್ಯರ್ಥಿಯು ಈಗಾಗಲೇ ರಾಜ್ಯ ಸರ್ಕಾರ/ಕೇಂದ್ರ ಸರ್ಕಾರದ ಯಾವುದೇ ಪ್ರಾಧಿಕಾರದಲ್ಲಿ ರಾಜ್ಯ ಅಥವಾ ಕೇಂದ್ರ ಸರ್ಕಾರದ ಸಾರ್ವಜನಿಕ ಸ್ವಾಮ್ಯದ ಕಂಪನಿಗಳಲ್ಲಿ (ಪ್ರಸ್ತುತ ಉದ್ಯೋಗಿಯಾಗಿದ್ದಲ್ಲಿ ಅಂಥಹವರು ಇಲಾಖಾ ವತಿಯಿಂದ ಕರ್ತವ್ಯದಿಂದ ಬಿಡುಗಡೆ ಮಾಡುವ) ಅವನು/ಅವಳು ಯಾವುದೇ ಹುದ್ದೆಯಲ್ಲಿ ಎಷ್ಟು ವರ್ಷಗಳ ಸೇವೆ ಸಲ್ಲಿಸಿರುವರೋ ಅಷ್ಟು ವರ್ಷಗಳು ಅಥವಾ 5 ವರ್ಷ, ಇವುಗಳಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು (ಗರಿಷ್ಠ ವಯೋಮಿತಿಯಲ್ಲಿ ರಿಯಾಯಿತಿ ನೀಡಲಾಗುವುದು.

2) ಕರ್ನಾಟಕ ರಾಜ್ಯ ಸರ್ಕಾರಿ ಸೇವಾ (ಸಾಮಾನ್ಯ ನೇಮಕಾತಿ ನಿಯಮಗಳ ಪ್ರಕಾರ ಮಾಜಿ ಸೈನಿಕರುಗಳಿಗೆ ಅವರು ಸೈನಿಕ ಸೇವೆಯಲ್ಲಿ ಸಲ್ಲಿಸಿರುವ ಸೇವಾ ಅವಧಿಯ ಜೊತೆಗೆ ಮೂರು ವರ್ಷಗಳಷ್ಟು ಗರಿಷ್ಠ ವಯೋಮಿತಿಯಲ್ಲಿ ಸಡಿಲಿಕೆ ನೀಡಲಾಗುವುದು.

3) ವಿಧವಾ ಅಭ್ಯರ್ಥಿಗಳಿಗೆ ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ ಗರಿಷ್ಠ ವಯೋಮಿತಿಯಲ್ಲಿ 10 ವರ್ಷಗಳ ರಿಯಾಯಿತಿ ನೀಡಲಾಗುವುದು.

## 4) ಹುದ್ದೆಗಳ ವರ್ಗೀಕರಣ

| ಕ್ರಮ ಸಂಖ್ಯೆ | ಹುದ್ದೆಗಳ ವಿವರ ಮತ್ತು ಒಟ್ಟು ಹುದ್ದೆಗಳು | ಉಳಿಕೆ ಕೇಡರ್ (Residuary Cadre) | ಹೈದ್ರಾಬಾದ್ ಕರ್ನಾಟಕ ಪ್ರದೇಶದ (ಸ್ಥಳೀಯ ವೃಂದ) |
|---|---|---|---|
| 1 | ದಂತ ತಂತ್ರಜ್ಞರು-04 ಹುದ್ದೆಗಳು | ಎಸ್.ಟಿ.-01 ಹಿಂಬಾಕಿ ಹುದ್ದೆ<br>ಪ್ರವರ್ಗ-I 01ಹುದ್ದೆ<br>ಸಾಮಾನ್ಯ ಅಭ್ಯರ್ಥಿ-01 ಹುದ್ದೆ<br>(ಒಟ್ಟು 03 ಹುದ್ದೆಗಳು) | ಸಾಮಾನ್ಯ ಅಭ್ಯರ್ಥಿ – 01 ಹುದ್ದೆ |
| 2 | ಪ್ರಯೋಗಶಾಲಾ ತಂತ್ರಜ್ಞರು-01 ಹುದ್ದೆ | -- | ಎಸ್.ಸಿ – 01 ಹುದ್ದೆ |
| | ಒಟ್ಟು ಹುದ್ದೆಗಳು-05 | 03 | 02 |

ಯಾವುದೇ ಕಾರಣಗಳನ್ನು ನೀಡದೇ ಪ್ರಕಟಣೆ ನೀಡಿರುವ ಹುದ್ದೆಗಳ ಸಂಖ್ಯೆಯಂತೆ ನೇಮಕಾತಿ ಮಾಡಲು ಅಥವಾ ಅಗತ್ಯತೆ ಆಧಾರದ ಮೇಲೆ ಬದಲಾವಣೆ ಮಾಡಲು ಅಥವಾ ಇಡೀ ನೇಮಕಾತಿ ಪ್ರಕ್ರಿಯೆಯನ್ನು ರದ್ದುಗೊಳಿಸುವ ಅಧಿಕಾರವನ್ನು ಆಯ್ಕೆ ಸಮಿತಿಯು ಹೊಂದಿದೆ.

## 5) ಆಯ್ಕೆ ವಿಧಾನ

ಅರ್ಹ ಅಭ್ಯರ್ಥಿಗಳಿಗೆ ಕರ್ನಾಟಕ ರಾಜ್ಯ ನಾಗರೀಕ ಸೇವಾ (ಸ್ಪರ್ಧಾತ್ಮಕ ಪರೀಕ್ಷೆಗಳ ಮೂಲಕ ನೇಮಕಾತಿ ಮತ್ತು ಆಯ್ಕೆ) ಸಾಮಾನ್ಯ ನಿಯಮ 2006ರನ್ವಯ ಈ ಸಂಸ್ಥೆಯ ವತಿಯಿಂದ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆಯನ್ನು ನಡೆಸಲಾಗುವುದು. ಅಭ್ಯರ್ಥಿಗಳು ಎಸ್.ಎಸ್.ಎಲ್.ಸಿ ಅಥವಾ ತತ್ಸಮಾನ ಅಥವಾ ಮೇಲ್ಪಟ್ಟ ಪರೀಕ್ಷೆಯಲ್ಲಿ ಪ್ರಥಮ ಅಥವಾ ದ್ವಿತೀಯ ಭಾಷೆಯಾಗಿ ಕನ್ನಡವನ್ನು ಅಧ್ಯಯನ ಮಾಡಿದ್ದಲ್ಲಿ ಅಥವಾ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿದ್ದಲ್ಲಿ ಸದರಿ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯ್ತಿ ಪಡೆಯಬಹುದಾಗಿದೆ.

ಸದರಿ ಕನ್ನಡ ಭಾಷಾ ಪರೀಕ್ಷೆಯಲ್ಲಿ ತೇರ್ಗಡೆ ಹೊಂದಿ ಅರ್ಹರಾದ ಹಾಗೂ ಕನ್ನಡ ಭಾಷಾ ಪರೀಕ್ಷೆಯಿಂದ ವಿನಾಯ್ತಿ ಪಡೆದ ಅಭ್ಯರ್ಥಿಗಳಲ್ಲಿ ಡಿಪ್ಲೋಮಾ ಪರೀಕ್ಷೆಯ ಎಲ್ಲಾ ವರ್ಷಗಳಲ್ಲಿ ಪಡೆದಿರುವ ಅಂಕಗಳ ಸರಾಸರಿ ಶೇಕಡಾವಾರು ಆಧಾರದ ಮೇಲೆ ಆಯಾ ಪ್ರವರ್ಗದಲ್ಲಿ ಹೆಚ್ಚು ಅಂಕ ಪಡೆದಿರುವ ಅಭ್ಯರ್ಥಿಗಳನ್ನು 1:5 ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು. ಅರೆ ವೈದ್ಯಕೀಯ ಡಿಪ್ಲೋಮಾ ಎಲ್ಲಾ ವರ್ಷದ ಪರೀಕ್ಷೆಯಲ್ಲಿ ಪಡೆದಿರುವ ಅಂಕಗಳ ಸರಾಸರಿ ಶೇಕಡಾವಾರನ್ನು ಶೇಕಡ 85ಕ್ಕೆ ಲೆಕ್ಕಾಚಾರ ಮಾಡಲಾಗುವುದು. ಸಂದರ್ಶನದಲ್ಲಿ ಗರಿಷ್ಠ 15 ಅಂಕಗಳನ್ನು ನಿಗದಿಪಡಿಸುವುದು.

ಡಿಪ್ಲೋಮಾ ಎಲ್ಲಾ ವರ್ಷದ ಪರೀಕ್ಷೆಗಳಲ್ಲಿ ಪಡೆದಿರುವ ಅಂಕಗಳ ಸರಾಸರಿ ಶೇಕಡಾವಾರನ್ನು ಶೇಕಡ 85ಕ್ಕೆ ಲೆಕ್ಕಾಚಾರ ಮಾಡಿರುವ ಶೇಕಡಾವಾರನ್ನು ಹಾಗೂ ಸಂದರ್ಶನದಲ್ಲಿ ಪಡೆದಿರುವ ಅಂಕಗಳನ್ನು ಒಟ್ಟುಗೂಡಿಸಿ ಅಭ್ಯರ್ಥಿಯನ್ನು ಆಯಾ ಪ್ರವರ್ಗದ ಮೆರಿಟ್ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಇಬ್ಬರು ಅಥವಾ ಹೆಚ್ಚಿನ ಅಭ್ಯರ್ಥಿಗಳು ಒಂದೇ ಶೇಕಡಾವಾರು ಹೊಂದಿದಲ್ಲಿ ಅವರಲ್ಲಿ ವಯಸ್ಸಿನಲ್ಲಿ ಹಿರಿಯ ಅಭ್ಯರ್ಥಿಯನ್ನು ಆಯ್ಕೆಗೆ ಪರಿಗಣಿಸಲಾಗುವುದು.

## 6) ಅಂಗವಿಕಲ ಅಭ್ಯರ್ಥಿ

ಸರ್ಕಾರದ ಆದೇಶ ಸಂಖ್ಯೆ: ಡಿಪಿಎಆರ್ 52 ಎಸ್ಆರ್ಆರ್ 99 ದಿನಾಂಕ: 29-11-2002 ಮತ್ತು ಡಿಪಿಎಆರ್ 50 ಎಸ್ಆರ್ಆರ್ 2000 ದಿನಾಂಕ 03-09-2005 ರಲ್ಲಿ ನಿಗದಿಪಡಿಸಿರುವ ಅಂಗವಿಕಲ ಅಭ್ಯರ್ಥಿಗಳನ್ನು ಮಾತ್ರ ಪರಿಗಣಿಸಲಾಗುವುದು. ಸರ್ಕಾರಿ ಆದೇಶ ಸಂಖ್ಯೆ: ಎಂಎಂಇ 107/ಪಿಹೆಚ್ಪಿ/2003 ದಿನಾಂಕ11/07/2003ರಲ್ಲಿ ವೈದ್ಯಕೀಯ ಪ್ರಮಾಣ ಪತ್ರವನ್ನು ಸಕ್ಷಮ ವೈದ್ಯಾಧಿಕಾರಿಗಳಿಂದ ಪಡೆದಿರಬೇಕು. ಅಭ್ಯರ್ಥಿಯು ಈ ಪ್ರಮಾಣ ಪತ್ರವನ್ನು ಅರ್ಜಿ ಸ್ವೀಕರಿಸಲು ನಿಗದಿಪಡಿಸಿರುವ ಕಡೆಯ ದಿನಾಂಕದೊಳಗೆ ಪಡೆದುಕೊಂಡಿರಬೇಕು.

Persons with disabilities equal opportunities protection of rights and full participation Act 1995 ರ ಸೆಕ್ಷನ್ 32 ರನ್ವಯ ಸರ್ಕಾರಿ ಅಧಿಸೂಚನೆ ಸಂಖ್ಯೆ: ಡಿಪಿಎಆರ್/52/ಎಸ್ಆರ್ಆರ್99 ದಿನಾಂಕ:29.11.2002ರಲ್ಲಿ ರಾಜ್ಯ ಸರ್ಕಾರವು ವಿವಿಧ ಇಲಾಖೆಗಳಲ್ಲಿ ಅಂಗವಿಕಲರು ನಿರ್ವಹಿಸಬಹುದಾದ ಹುದ್ದೆಗಳನ್ನು ಗುರುತಿಸಿದೆ ಅದರಂತೆ ಅಂಗವಿಕಲರಿಗೆ ಶೇಕಡ 3 ರಷ್ಟು ಸಮತಳ ಮೀಸಲಾತಿಯನ್ನು ಗುರುತಿಸಲಾದ ಹುದ್ದೆಗಳಲ್ಲಿ ನೀಡಲಾಗುತ್ತದೆ.

## 7) ಅರ್ಜಿ ಶುಲ್ಕ- ಅಭ್ಯರ್ಥಿಗಳು ಸಲ್ಲಿಸಬೇಕಾದ ಅರ್ಜಿ ಶುಲ್ಕ ಈ ಕೆಳಕಂಡಂತಿದೆ.

ಸಾಮಾನ್ಯ ಹಾಗೂ ಇತರೆ ಹಿಂದುಳಿದ ವರ್ಗ -ರೂ. 500/-
ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ/ಪ್ರವರ್ಗ-1 -ರೂ. 200/-

ಅರ್ಜಿ ಶುಲ್ಕವನ್ನು **'ಡೀನ್ ಮತ್ತು ನಿರ್ದೇಶಕರು, ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು'** ಇವರ ಹೆಸರಿನಲ್ಲಿ ರಾಷ್ಟ್ರೀಕೃತ ಬ್ಯಾಂಕಿನಿಂದ ಡಿಮ್ಯಾಂಡ್ ಡ್ರಾಫ್ಟ್ ಪಡೆದು ಸಲ್ಲಿಸತಕ್ಕದ್ದು

ಈ ಸ್ವಾಯತ್ತ ಸಂಸ್ಥೆಯಲ್ಲಿ ನೇಮಕಾತಿ ಹೊಂದುವ ಸಿಬ್ಬಂದಿಗಳು ಸಂಸ್ಥೆಯ ನಿಯಮ ಮತ್ತು ನಿಬಂಧನೆಗಳಿಗೆ ಒಳಪಟ್ಟಿರುತ್ತಾರೆ. ಸರ್ಕಾರವು ಮೀಸಲಾತಿ ಸಂಬಂಧ ಕಾಲಕಾಲಕ್ಕೆ ಹೊರಡಿಸುವ ಆದೇಶಗಳನ್ನು ಪಾಲಿಸಿ ಹುದ್ದೆಗಳನ್ನು ಭರ್ತಿ ಮಾಡಲಾಗುವುದು.

## 8) ನಿಗದಿತ ಅರ್ಜಿ ನಮೂನೆ ದೊರೆಯುವ ಸ್ಥಳ

ನಿಗದಿತ ಅರ್ಜಿ ನಮೂನೆಯನ್ನು ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು ಇದರ ವೆಬ್‌ಸೈಟ್ **https://www.karnataka.gov.in/gdcrib/pages/home.aspx** ನಿಂದ ಪಡೆದುಕೊಂಡು ಅರ್ಜಿಯನ್ನು ಭರ್ತಿ ಮಾಡಿ ಅಂಚೆ ಮೂಲಕ ಅಥವಾ ಖುದ್ದಾಗಿ ಸೂಕ್ತ ದಾಖಲಾತಿ ಮತ್ತು ಅರ್ಜಿ ಶುಲ್ಕದ ಡಿ.ಡಿ.ಯೊಂದಿಗೆ **ದಿನಾಂಕ:21.01.2017ರ ಸಂಜೆ 4.00** ಗಂಟೆಯೊಳಗೆ ಡೀನ್ ಕಮ್ ನಿರ್ದೇಶಕರು, ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು, ವಿಕ್ಟೋರಿಯಾ ಆಸ್ಪತ್ರೆ ಆವರಣ, ಕೋಟೆ, ಬೆಂಗಳೂರು-560 002 ಇವರಿಗೆ ಸಲ್ಲಿಸತಕ್ಕದ್ದು. ಅವಧಿ ಮೀರಿ ಸಲ್ಲಿಸಿದ /ಅಪೂರ್ಣವಾದ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

ಪ.ಜಾ/ಪ.ಪಂ/ಪ್ರವರ್ಗ-1 ಹಾಗೂ ಇತರೆ ಹಿಂದುಳಿದ ವರ್ಗಗಳ ಜಾತಿಯಲ್ಲಿ ಮೀಸಲಾತಿ ಇಚ್ಛಿಸುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ದಿನಾಂಕದೊಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ನಿಗದಿತ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದು ಸಲ್ಲಿಸತಕ್ಕದ್ದು.

## 9) ಸೂಚನೆಗಳು

1) ಅರ್ಜಿ ನಮೂನೆಯೊಂದಿಗೆ ಅಭ್ಯರ್ಥಿಗಳ ಮಾಹಿತಿಗೆ ವಿವರವಾದ ಸೂಚನೆಗಳನ್ನು ಒದಗಿಸಲಾಗಿದೆ. ಈ ಸೂಚನೆಗಳನ್ನು ಓದಿಕೊಂಡು ಅರ್ಜಿಗಳನ್ನು ಭರ್ತಿ ಮಾಡತಕ್ಕದ್ದು. ಅಭ್ಯರ್ಥಿಯು ಅರ್ಜಿಯನ್ನು ಸಮರ್ಪಕವಾಗಿ ಭರ್ತಿ ಮಾಡದೇ ಹಾಗೂ ಅಗತ್ಯ ದಾಖಲಾತಿಗಳನ್ನು ಸಲ್ಲಿಸದೇ ಅರ್ಜಿಯು ತಿರಸ್ಕೃತವಾದಲ್ಲಿ ಅಥವಾ ಯಾವುದೇ ಸೌಲಭ್ಯದಿಂದ ವಂಚಿತರಾದಲ್ಲಿ ಅದಕ್ಕೆ ಅಭ್ಯರ್ಥಿಗಳೇ ನೇರ ಜವಾಬ್ದಾರರು.

2) ರಾಜ್ಯ/ಕೇಂದ್ರ ಸರ್ಕಾರಿ ಇಲಾಖೆಗಳಲ್ಲಿ/ಸ್ವಾಯತ್ತ/ಅನುದಾನಿತ ಸಂಸ್ಥೆಗಳಲ್ಲಿ ಸೇವೆ ಸಲ್ಲಿಸುತ್ತಿರುವ ನೌಕರರು ತಮ್ಮ ಅರ್ಜಿಗಳನ್ನು ತಮ್ಮ ನೇಮಕಾತಿ ಪ್ರಾಧಿಕಾರದ ಮುಖಾಂತರ ಸಲ್ಲಿಸತಕ್ಕದ್ದು.

3) ಮೂಲ ಅರ್ಜಿಯಲ್ಲಿ ದಾಖಲಿಸಿರುವ ಮಾಹಿತಿಗಳನ್ನು ಯಾವುದೇ ಹಂತದಲ್ಲೂ ಬದಲಾಯಿಸಲು ಅವಕಾಶವಿರುವುದಿಲ್ಲ.

4) ಯಾವುದೇ ಹಂತದಲ್ಲಿ ಪ್ರವರ್ಗವನ್ನು ಹೊಸದಾಗಿ ಸೇರ್ಪಡೆ ಮಾಡಲು ಅಥವಾ ಬದಲಾವಣೆ ಮಾಡಲು ಅವಕಾಶವಿಲ್ಲ.

5) ಪ.ಜಾ/ಪ.ಪಂ/ಪ್ರವರ್ಗ-1 ಹಾಗೂ ಇತರೆ ಹಿಂದುಳಿದ ವರ್ಗಗಳ ಮೀಸಲಾತಿ ಇಚ್ಛಿಸುವ ಅಭ್ಯರ್ಥಿಗಳು ಅರ್ಜಿ ಸಲ್ಲಿಸುವ ದಿನಾಂಕದೊಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ನಿಗದಿತ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದು ಸಲ್ಲಿಸತಕ್ಕದ್ದು. ಹಾಗೂ ಅವುಗಳ ವಿವರವನ್ನು ಅರ್ಜಿಯಲ್ಲಿ ನೀಡಿರುವ ಸಂಬಂಧಿಸಿದ ಅಂಕಣಗಳಲ್ಲಿ ತಪ್ಪದೇ ನಮೂದಿಸಬೇಕು. (ಪ.ಜಾ/ಪ.ಪಂ ಅಭ್ಯರ್ಥಿಗಳು ನಮೂನೆ-ಡಿ, ಪ್ರವರ್ಗ-1 ಅಭ್ಯರ್ಥಿಗಳು ನಮೂನೆ-ಇ ಮತ್ತು 2ಎ, 2ಬಿ, 3ಎ, 3ಬಿ, ಅಭ್ಯರ್ಥಿಗಳು ನಮೂನೆ-ಎಫ್‌ರಲ್ಲಿ ಸಂಬಂಧಿಸಿದ ತಹಶೀಲ್ದಾರ್‌ರವರಿಂದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ ಪಡೆದಿರಬೇಕು)

6) ಅಭ್ಯರ್ಥಿಯು ಅರ್ಜಿಯಲ್ಲಿ ನಮೂದಿಸಿರುವ ವಿವರಗಳಿಗೆ ಸಂಬಂಧಪಟ್ಟಂತೆ ಅಂದರೆ, ಜನ್ಮ ದಿನಾಂಕ, ವಿದ್ಯಾರ್ಹತೆ ಪ್ರಮಾಣ ಪತ್ರಗಳು ಹಾಗೂ ಇತರೆ ದಾಖಲಾತಿಗಳ ಸ್ವಯಂ ದೃಢೀಕೃತ ಪ್ರತಿಗಳನ್ನು ಅರ್ಜಿಯೊಂದಿಗೆ ಲಗತ್ತಿಸಬೇಕು. ಸಂದರ್ಶನದ ಸಮಯದಲ್ಲಿ ಮೂಲ ಪ್ರಮಾಣ ಪತ್ರಗಳನ್ನು ಹಾಜರುಪಡಿಸಬೇಕು.

7) ಸಹಿ ಮಾಡದ ಅಥವಾ ಭಾವಚಿತ್ರವನ್ನು ಅಂಟಿಸದ ಅರ್ಜಿಯನ್ನು ತಿರಸ್ಕರಿಸಲಾಗುವುದು. ಆದುದರಿಂದ ಅಭ್ಯರ್ಥಿಗಳು ತಮ್ಮ ಹಿತದೃಷ್ಠಿಯಿಂದ ಸೂಚನೆಗಳನ್ನು ಓದಿ ಅರ್ಥ ಮಾಡಿಕೊಂಡು ನಂತರ ಅರ್ಜಿಯನ್ನು ಭರ್ತಿ ಮಾಡತಕ್ಕದ್ದು, ಅಪೂರ್ಣ ಅರ್ಜಿಗಳನ್ನು ತಿರಸ್ಕರಿಸಲಾಗುವುದು.

8) ಅಭ್ಯರ್ಥಿಗಳು ಅರ್ಹತೆ ಮತ್ತು ಆಯ್ಕೆ ವಿಷಯದಲ್ಲಿ ನೇಮಕಾತಿ ಪ್ರಾಧಿಕಾರದ ತೀರ್ಮಾನವೇ ಅಂತಿಮವಾಗಿರುತ್ತದೆ.

9) ಇತರೆ ಯಾವುದೇ ದಾಖಲೆಗಳನ್ನು ಹಾಜರುಪಡಿಸಲು ಸಮಿತಿ ನಿರ್ದೇಶಿಸಬಹುದು.

10) ಅಭ್ಯರ್ಥಿಯು ತನ್ನ ಆಯ್ಕೆಗಾಗಿ ಯಾವುದೇ ವಿಧವಾದ ಪ್ರಭಾವ ಬೀರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಲ್ಲಿ ಅವರನ್ನು ಯಾವ ಮುನ್ಸೂಚನೆ ನೀಡದೇ ಅವರನ್ನು ಅನರ್ಹಗೊಳಿಸಲಾಗುವುದು.

11) ಅರ್ಜಿಯಲ್ಲಿ ನೀಡುವ ವಿಳಾಸವೇ ಅಂತಿಮವಾಗಿದ್ದು ಪತ್ರ ವ್ಯವಹಾರಗಳನ್ನು ಅದೇ ವಿಳಾಸಕ್ಕೆ ಕಳುಹಿಸಿಕೊಡಲಾಗುವುದು. ನಂತರದಲ್ಲಿ ವಿಳಾಸ ಬದಲಾವಣೆ ಬಗ್ಗೆ ಯಾವುದೇ ಪತ್ರ ವ್ಯವಹಾರವನ್ನು ಪರಿಗಣಿಸಲಾಗುವುದಿಲ್ಲ.

12) ಅರ್ಜಿಯಲ್ಲಿ ತಪ್ಪು ಮಾಹಿತಿ ನೀಡಿ ಉದ್ಯೋಗ ಪಡೆಯುವ ಅಭ್ಯರ್ಥಿಗಳನ್ನು ಯಾವುದೇ ಸಮಯದಲ್ಲಾದರೂ ವಜಾ/ತೆಗೆದು ಹಾಕಲಾಗುತ್ತದೆ.

13) ಅಂಚೆ ಮೂಲಕ ಸ್ವೀಕೃತವಾಗುವ ಅರ್ಜಿಗಳಲ್ಲಿ ದಾಖಲಾತಿಗಳು ಇಲ್ಲದಿದ್ದಲ್ಲಿ ಸಂಸ್ಥೆಯ ಜವಾಬ್ದಾರಿ ಇರುವುದಿಲ್ಲ.

14) ಅರ್ಜಿಗಳನ್ನು ಸ್ವೀಕರಿಸಲು ನಿಗಧಿಪಡಿಸಿದ ಕೊನೆಯ ದಿನಾಂಕವು ಸಾರ್ವಜನಿಕ ರಜೆಯೆಂದು ಘೋಷಿಸಲ್ಪಟ್ಟರೆ ಮರು ದಿನದ ದಿನಾಂಕವು ಅರ್ಜಿ ಸ್ವೀಕರಿಸಲು ಕೊನೆಯ ದಿನಾಂಕವಾಗುವುದು.

15) ಅಭ್ಯರ್ಥಿಯು ಮಾನಸಿಕವಾಗಿ ಮತ್ತು ದೈಹಿಕವಾಗಿ ಅರೋಗ್ಯವಂತರಾಗಿರಬೇಕು ಮತ್ತು ಅವರ ನೇಮಕಾತಿಯು ಕರ್ತವ್ಯಗಳ ದಕ್ಷ ನಿರ್ವಹಣೆಗೆ ಆತಂಕವನ್ನುಂಟು ಮಾಡುವ ಸಂಭವ ಇರುವ ಯಾವುದೇ ದೈಹಿಕ ನ್ಯೂನತೆಯಿಂದ ಮುಕ್ತವಾಗಿರಬೇಕು.

16) ನೇಮಕಾತಿಗೆ ಸಂಬಂಧಿಸಿದ ಮುಂದಿನ ಮಾಹಿತಿಗಳನ್ನು ಸಂಸ್ಥೆಯ ವೆಬ್‌ಸೈಟ್‌ನಿಂದ ಪಡೆದುಕೊಳ್ಳುವುದು.

## 10) ಅಭ್ಯರ್ಥಿಗಳು ಅರ್ಜಿಯೊಂದಿಗೆ ಈ ಕೆಳಕಂಡ ದಾಖಲಾತಿಗಳ ಪ್ರತಿಗಳನ್ನು ಸ್ವಯಂ ದೃಢೀಕರಿಸಿ ತಪ್ಪದೆ ಸಲ್ಲಿಸತಕ್ಕದ್ದು.

1) ಜನ್ಮ ದಿನಾಂಕವನ್ನು ಸಮರ್ಥಿಸುವ ಪ್ರಮಾಣ ಪತ್ರ.
2) 10ನೇ ತರಗತಿ ವಿದ್ಯಾರ್ಹತೆ ಪ್ರಮಾಣ ಪತ್ರ/ಅಂಕಪಟ್ಟಿ.
3) ಮಾಜಿ ಸೈನಿಕರಾಗಿ ಕಾರ್ಯನಿರ್ವಹಿಸಿರುವ/ಅವಲಂಬಿತರ ಪ್ರಮಾಣ ಪತ್ರ.
4) ಹಾಲಿ ಕಾರ್ಯ ನಿರ್ವಹಿಸುತ್ತಿರುವ ಉದ್ಯೋಗಕ್ಕೆ ಸಂಬಂಧಿಸಿದ ಸೇವಾ ಪ್ರಮಾಣ ಪತ್ರ ಹಾಗೂ ಈ ಹುದ್ದೆಗೆ ಅರ್ಜಿ ಸಲ್ಲಿಸಲು ನೇಮಕಾತಿ ಪ್ರಾಧಿಕಾರದಿಂದ ಪಡೆದುಕೊಂಡಿರುವ ಅನುಮತಿ ಪತ್ರ.
5) ಹೈದ್ರಾಬಾದ್ ಕರ್ನಾಟಕ ಪ್ರಾದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ ಸಂಬಂಧ ಸಕ್ಷಮ ಪ್ರಾಧಿಕಾರದಿಂದ ನಿಗದಿತ ನಮೂನೆಯಲ್ಲಿ ಪಡೆದಿರುವ ಅರ್ಹತಾ ಪ್ರಮಾಣ ಪತ್ರ.
6) ಪ್ರಸ್ತುತ ಚಾಲ್ತಿಯಲ್ಲಿರುವ ನಮೂನೆಗಳಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರ.
7) ಸಂಬಂಧಿಸಿದ ಹುದ್ದೆಗೆ ಹೊಂದಿರುವ ಡಿಪ್ಲೋಮ/ತತ್ಸಮಾನ ವಿದ್ಯಾರ್ಹತೆ ಪ್ರಮಾಣ ಪತ್ರ.
8) ಮೀಸಲಾತಿ ಕೋರಿದ್ದಲ್ಲಿ ನಿಗದಿತ ನಮೂನೆಯಲ್ಲಿ ಸಕ್ಷಮ ಪ್ರಾಧಿಕಾರದಿಂದ ಪಡೆದ ಪ್ರಮಾಣ ಪತ್ರ.
9) ಅನುಭವ ಪ್ರಮಾಣ ಪತ್ರ.
10) ಡಿಮ್ಯಾಂಡ್ ಡ್ರಾಫ್ಟ್.
11) ಡೆಂಟಲ್ ಮೆಕಾನಿಕ್ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ದಂತ ಪರಿಷತ್ತಿನಲ್ಲಿ ನೊಂದಾಯಿಸಿರುವ ಚಾಲ್ತಿಯಲ್ಲಿರುವ ಪ್ರಮಾಣ ಪತ್ರ.

**11) ಯಾವುದೇ ವ್ಯಕ್ತಿಯು ನೇಮಕಾತಿಗೆ ಈ ಕೆಳಕಂಡ ಸಂದರ್ಭದಲ್ಲಿ ಅರ್ಹನಾಗುವುದಿಲ್ಲ.**

1) ಯಾವುದೇ ನಿಷೇಧಿತ ಸಂಘ ಸಂಸ್ಥೆಯ ಸದಸ್ಯನಾಗಿರುವಲ್ಲಿ ಅಥವಾ ಸದಸ್ಯರಾಗಿದ್ದಲ್ಲಿ ಅಥವಾ ಯಾವುದೇ ನಿಷೇಧಿತ ಸಂಸ್ಥೆಯ ಕಾರ್ಯ ಚಟುವಟಿಕೆಯಲ್ಲಿ ಸಕ್ರಿಯವಾಗಿ ಭಾಗವಹಿಸಿದ್ದಲ್ಲಿ.

2) ವ್ಯಕ್ತಿಯು ನ್ಯಾಯಬಾಹಿರ ಕೃತ್ಯಗಳಲ್ಲಿ ತೊಡಗಿ ಶಿಕ್ಷೆಗೆ ಒಳಗಾದ ಪ್ರಸಂಗಗಳಲ್ಲಿ, ಒಬ್ಬ ಜೀವಂತ ಪತ್ನಿಗಿಂತ ಹೆಚ್ಚು ಮಂದಿ ಪತ್ನಿಯರನ್ನು ಹೊಂದಿರುವ ಪುರುಷ ಅಭ್ಯರ್ಥಿಯು ಮತ್ತು ಈಗಾಗಲೇ ಇನ್ನೊಬ್ಬ ಹೆಂಡತಿಯಿರುವ ವ್ಯಕ್ತಿಯನ್ನು ಮದುವೆಯಾಗಿರುವ ಮಹಿಳಾ ಅಭ್ಯರ್ಥಿಯು ನೇಮಕಾತಿಗೆ ಅರ್ಹರಾಗುವುದಿಲ್ಲ.

3) ಅಭ್ಯರ್ಥಿಯ ಮತ್ತೊಬ್ಬ ವ್ಯಕ್ತಿಯಂತೆ ನಟಿಸಿ ವಂಚಿಸಿದ, ದಾಖಲೆಗಳನ್ನು ತಿದ್ದಿದ, ಸೃಷ್ಟಿಸಿದ, ಸರಿಯಿಲ್ಲದ, ಸುಳ್ಳು ಅಥವಾ ದೋಷಪೂರ್ಣ ವಿವರಗಳನ್ನು ನೀಡುವ, ನೇಮಕಾತಿಗಾಗಿ ನಡೆಸುವ ನೇರ ನೇಮಕಾತಿಯಲ್ಲಿ ಅವನ/ಅವಳ ನೇಮಕಾತಿಗಾಗಿ ಸಂಬಂಧಿಸಿದಂತೆ ಯಾವುದೇ ಇತರ ಅಕ್ರಮ/ಅನುಚಿತ ವಿಧಾನಗಳನ್ನು ಅನುಸರಿಸಿದ ಕಾರಣದಿಂದಾಗಿ ತಪ್ಪಿತಸ್ಥನೆಂದು ಕಂಡು ಬಂದಲ್ಲಿ ಅವನ/ಅವಳ ಅಭ್ಯರ್ಥಿತನವನ್ನು ಯಾವುದೇ ಸೂಚನೆ ನೀಡದೆ ರದ್ದುಗೊಳಿಸಲಾಗುವುದು ಮತ್ತು ಅವರನ್ನು ಕ್ರಿಮಿನಲ್ ಪ್ರಾಸಿಕ್ಯೂಷನ್‌ಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡಿಸಲು ಸಂಬಂಧಪಟ್ಟ ಇಲಾಖೆಗೆ ತಿಳಿಸಲಾಗುವುದು.

ಡೀನ್ ಮತ್ತು ನಿರ್ದೇಶಕರು,
ಸರ್ಕಾರಿ ದಂತ ಕಾಲೇಜು ಮತ್ತು
ಸಂಶೋಧನಾ ಸಂಸ್ಥೆ, ಬೆಂಗಳೂರು.

# ಸರ್ಕಾರಿ ದಂತ ಕಾಲೇಜು ಮತ್ತು ಸಂಶೋಧನಾ ಸಂಸ್ಥೆ, ಬೆಂಗಳೂರು

ಇತ್ತೀಚೀನ
ಪಾಸ್‌ಪೋರ್ಟ್
ಸೈಜಿನ ಫೋಟೋ
ಲಗತ್ತಿಸುವುದು

**ಅಧಿಸೂಚನೆ ಸಂಖ್ಯೆ:**ಸದಂಕಾಸಂಸಂ/ಸಿ(2)/12/2016–17 **ದಿನಾಂಕ:**27.12.2016

## ಗ್ರೂಪ್–ಸಿ ವರ್ಗದ ಅರೆ ವೈದ್ಯಕೀಯ ಹುದ್ದೆಗಳ ಅರ್ಜಿ ನಮೂನೆ

| | | |
|---|---|---|
| 1 | ಅಭ್ಯರ್ಥಿಯ ಹೆಸರು<br>10ನೇ ತರಗತಿ ಅಂಕಪಟ್ಟಿ/ಪ್ರಮಾಣ ಪತ್ರದಲ್ಲಿ ಇರುವಂತೆ) | |
| 2 | ತಂದೆಯ/ಗಂಡನ ಹೆಸರು | |
| 3 | ಹುಟ್ಟಿದ ದಿನಾಂಕ ಮತ್ತು ವಯಸ್ಸು<br>(ಅರ್ಜಿ ಸಲ್ಲಿಸಲು ಅಧಿಸೂಚನೆ ಹೊರಡಿಸಿದ ದಿನಾಂಕಕ್ಕೆ ಆಗುವ ವಯಸ್ಸು ದಾಖಲೆ ಸಹಿತ) | |
| 4 | ಖಾಯಂ ವಿಳಾಸ | |
| 5 | ಅಂಚೆ ವಿಳಾಸ ಮತ್ತು ದೂರವಾಣಿ ಸಂಖ್ಯೆ | |
| 6 | ಲಿಂಗ | (ಗಂಡು/ಹೆಣ್ಣು) |
| 7 | ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದ ವರ್ಗದಲ್ಲಿ ಅಥವಾ ಸರ್ಕಾರದ ಸ್ವಾಮ್ಯಕ್ಕೆ ಸೇರಿದ ಇಲ್ಲವೇ ನಿಯಂತ್ರಣಕ್ಕೆ ಸೇರಿದ ನಿಗಮದಲ್ಲಿ ಸೇವೆ ಸಲ್ಲಿಸಿದವರೇ? ಹಾಗಿದ್ದರೆ ಎಷ್ಟು ವರ್ಷ? ಪ್ರತಿ ಲಗತ್ತಿಸುವುದು. | |
| 8 | ಧರ್ಮ, ಜಾತಿ, ವರ್ಗ<br>(ಮೀಸಲಾತಿ ಸ್ಪಷ್ಟವಾಗಿ ನಮೂದಿಸುವುದು) | |
| 9 | ಒಳ ಮೀಸಲಾತಿ ವಿವರ<br>ಎ) ಅಂಗ ವಿಕಲರೇ?<br>ಬಿ) ಮಾಜಿ ಸೈನಿಕರೇ?<br>ಸಿ) ಮಹಿಳಾ ಅಭ್ಯರ್ಥಿಯೇ?<br>ಡಿ) ಯೋಜನಾ ನಿರಾಶ್ರಿತರೇ? | |

| | | | | |
|---|---|---|---|---|
| 10 | ವಿದ್ಯಾರ್ಹತೆ<br>(ಹುದ್ದೆಗೆ ನಿಗದಿಪಡಿಸಿದ ದಾಖಲೆಗಳನ್ನು ಸ್ವಯಂ ದೃಢೀಕರಿಸಿ ಲಗತ್ತಿಸುವುದು) | **ಒಟ್ಟು ಅಂಕ** | **ಗಳಿಸಿದ ಅಂಕ** | **ಶೇಕಡಾವಾರು** |
| ಎ | | | | |
| ಬಿ | | | | |
| ಸಿ | | | | |
| ಡಿ | | | | |
| 11 | ಅರ್ಜಿ ಶುಲ್ಕ ಪಾವತಿಸಿದ ರಾಷ್ಟ್ರೀಕೃತ ಬ್ಯಾಂಕ್‌ನ ವಿವರ | **ಡಿ.ಡಿ. ಸಂಖ್ಯೆ ಮತ್ತು ದಿನಾಂಕ** | | **ಮೊತ್ತ** |
| | | **ಬ್ಯಾಂಕ್‌ನ ಹೆಸರು** | | |
| 12 | ವಿವಾಹಿತರೇ? | ಹೌದು / ಇಲ್ಲ | | |
| 13 | ಹೈದರಾಬಾದ್ ಕರ್ನಾಟಕ ಪ್ರಾದೇಶಕ್ಕೆ ನೇಮಕಾತಿಯಲ್ಲಿ ಮೀಸಲಾತಿ ಸಂಬಂಧ ಸಕ್ಷಮ ಪ್ರಾಧಿಕಾರದಿಂದ ಪಡೆದಿರುವ ನಿಗದಿತ ನಮೂನೆಯ ಪ್ರಮಾಣ ಪತ್ರ | | | |
| 14 | ದಂತ ಪರಿಷತ್ತಿನಲ್ಲಿ ನೊಂದಾಣಿ ಮಾಡಿಸಿರುವ ಪ್ರಮಾಣ ಪತ್ರ | | | |
| 15 | ಇತರೇ ಶೈಕ್ಷಣಿಕ ವಿದ್ಯಾರ್ಹತೆಗಳು | | | |

ನನಗೆ ತಿಳಿದಿರುವಂತೆ ಮೇಲೆ ಒದಗಿಸಲಾಗಿರುವ ಮಾಹಿತಿಯು ಸತ್ಯವೆಂದು ಮತ್ತು ಸಂಪೂರ್ಣವೆಂದು ಪ್ರಮಾಣೀಕರಿಸುತ್ತೇನೆ. ಸರ್ಕಾರಿ ಉದ್ಯೋಗಕ್ಕೆ ಸೇರಲು ಅನರ್ಹರಾಗುವಂತಹ ಯಾವ ಪೂರ್ವೋತ್ತರಗಳನ್ನು ನಾನು ಹೊಂದಿರುವುದಿಲ್ಲ.

ಸ್ಥಳ :

ದಿನಾಂಕ:

ಅಭ್ಯರ್ಥಿಯ ಸಹಿ: